# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1008 |
| ಸದಸ್ಯರ ಹೆಸರು | : | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 23-02-2024 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆ ಪ್ರಕರಣಗಳು ಕಂಡುಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ದಾಖಲಾಗಿರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ಒದಗಿಸುವುದು)</td><td>ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಮಹಿಳೆಯರು ಮತ್ತು ಮಕ್ಕಳ ಅಕ್ರಮ ಸಾಗಣೆ ಕುರಿತಾಗಿ ದಾಖಲಿಸಿರುವ ಪ್ರಕರಣಗಳ ವಿವರ ಈ ಕೆಳಕಂಡಂತಿದೆ.<br><table>
<tr><th>ವರ್ಷ</th><th>ಮಹಿಳೆ</th><th>ಹುಡುಗ</th><th>ಹುಡುಗಿ</th></tr>
<tr><td>2021</td><td>216</td><td>21</td><td>17</td></tr>
<tr><td>2022</td><td>321</td><td>31</td><td>39</td></tr>
<tr><td>2023</td><td>299</td><td>4</td><td>27</td></tr>
<tr><td>2024 (ಜನವರಿ-31)</td><td>24</td><td>0</td><td>4</td></tr>
</table><br>ಜಿಲ್ಲಾವರು ಮಾಹಿತಿಯನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ.</td></tr>
<tr><td>ಆ.</td><td>ಮಹಿಳೆಯರು ಮತ್ತು ಮಕ್ಕಳ ಅಕ್ರಮ ಸಾಗಾಣಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;</td><td><u>ಒಳಾಡಳಿತ ಇಲಾಖೆ:</u><br>ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.<br>• ಅಪಹರಣ ಪ್ರಕರಣ ವರದಿಯಾದ ಕೂಡಲೇ ರಾಜ್ಯದ ಎಲ್ಲಾ ಠಾಣೆಗಳಿಗೆ ಪ್ರಕರಣದ ಆರೋಪಿ ಮತ್ತು ಅಪಹರಿಸಿರುವ ಮಗುವಿನ ಬಗ್ಗೆ ಯಾವುದೇ ಸುಳಿವು ದೊರೆತಲ್ಲಿ, ಪೋಷಕರ ಒಪ್ಪಿಗೆ ಮೇರೆಗೆ ಮಾಹಿತಿ ಪಡೆದುಕೊಳ್ಳಲು ಪತ್ರಿಕಾ ಪ್ರಕಟಣೆ, ದೂರದರ್ಶನ, ಆಕಾಶವಾಣಿ ಇತ್ಯಾದಿ ಮಾಧ್ಯಮಗಳಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>• ರಾಜ್ಯದ ಗಡಿ ಪ್ರದೇಶಗಳಲ್ಲಿ ಮತ್ತು ಬಸ್ ನಿಲ್ದಾಣ/ರೈಲ್ವೆ ನಿಲ್ದಾಣಗಳಲ್ಲಿ ಭಿತ್ತಿ ಪತ್ರಗಳನ್ನು /ಫೋಟೋಗಳನ್ನು ಅಂಟಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.<br>• ರಿಜನಲ್ ಪಾಸ್‌ಪೋರ್ಟ್ ಆಫೀಸ್‌ನಲ್ಲಿ ಯಾರಾದರೂ ನವಜಾತ ಮಕ್ಕಳಿಗೆ ಪಾಸ್‌ಪೋರ್ಟ್‌ಗಾಗಿ ಅರ್ಜಿ ಸಲ್ಲಿಸಿರುವರೇ ಎಂಬ ಬಗ್ಗೆ ಪರಿಶೀಲನೆ ಮಾಡಲಾಗುತ್ತಿದೆ.<br>• ಲುಕ್‌ಔಟ್ ನೋಟೀಸ್ ನೀಡುವುದು, ಅಕ್ಕ-ಪಕ್ಕದ ಜಿಲ್ಲೆಗಳಲ್ಲಿ ಕಾಣೆಯಾದ ಮಕ್ಕಳ ಕುರಿತು ಹುಡುಕಾಟ ನಡೆಸುವುದು.<br>• ದಕ್ಷ ಅಧಿಕಾರಿಗಳ ತಂಡವನ್ನು ನಿರ್ಮಿಸಿ ಎಲ್ಲಾ ಕಡೆಗಳಲ್ಲಿ ಹುಡುಕಾಟ ನಡೆಸುವುದು, ಅಕ್ಕ-ಪಕ್ಕದ ಜಿಲ್ಲೆಗಳ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಅಪರಿಚಿತ ಶವಗಳ UDR ಪ್ರಕರಣಗಳನ್ನು ಪರಿಶೀಲಿಸುವುದು, ಜಿಲ್ಲಾ ಅಪರಾಧ ದಾಖಲಾತಿ ವಿಭಾಗಗಳಲ್ಲಿನ ವರದಿಗಳನ್ನು ಪರಿಶೀಲಿಸುವುದು, ಪೇಪರ್ ಮತ್ತು ದೂರವಾಣಿಯಲ್ಲಿ ಕಾಣೆಯಾದ ಮಕ್ಕಳ ಭಾವಚಿತ್ರವನ್ನು ಪ್ರಸಾರ ಮಾಡುವುದು.</td></tr>
</table>

- ಪ್ರತಿ ಮಾನವ ಕಳ್ಳಸಾಗಾಣಿಕೆ ನಿಷೇಧ ಘಟಕಗಳಿಗೆ ಹಿರಿಯ ಮತ್ತು ಕಿರಿಯ ಮಕ್ಕಳ ಕಲ್ಯಾಣಾಧಿಕಾರಿಗಳನ್ನು ನಿಯೋಜಿಸಿ, ಅವರುಗಳಿಗೆ ತರಬೇತಿ ನೀಡಲಾಗಿರುತ್ತದೆ.
- ಮಾನವ ಸಾಗಾಣಿಕೆ ಮಾಡುವವರ ವಿರುದ್ಧ ಬಾತ್ಮಿ ಸಂಗ್ರಹಿಸಿ ತಪ್ಪಿತಸ್ಥರ ವಿರುದ್ಧ ಕಲಂ.370, 370[ಎ] ಐಪಿಸಿ ಮತ್ತು ಇಮ್ಮಾರಲ್ ಟ್ರಾಫಿಕಿಂಗ್ ಪ್ರಿವೆನ್ಷನ್ ಆಕ್ಟ್ (ಐ.ಟಿ.ಪಿ.ಎ) ಹಾಗೂ ಸಂಬಂಧಪಟ್ಟ ಇತರೆ ಕಾಯ್ದೆ ರೀತ್ಯಾ ಪ್ರಕರಣಗಳನ್ನು ದಾಖಲಿಸಿ, ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾನವ ಕಳ್ಳಸಾಗಾಣಿಕೆಯ ಪ್ರಕರಣಗಳ ತನಿಖೆಯನ್ನು ಸಮರ್ಥವಾಗಿ ನಿರ್ವಹಿಸಲು ತನಿಖಾಧಿಕಾರಿಗಳಿಗಾಗಿ ನಿರ್ದಿಷ್ಟ ಕಾರ್ಯವಿಧಾನವನ್ನು ಸಿದ್ಧಪಡಿಸಿ, ಸ್ಥಾಯಿ ಆದೇಶದ ಮೂಲಕ ರಾಜ್ಯದ ಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಿಕೊಡಲಾಗಿದೆ.
- ಅಪರಿಚಿತ ವ್ಯಕ್ತಿಗಳ ಬಳಿ ಸಂಪರ್ಕ ಇಟ್ಟುಕೊಳ್ಳದಂತೆ, ಆಸೆ ಆಮಿಷಗಳನ್ನು ಒಡ್ಡುವ ಆಸಾಮಿಗಳ ಬಗ್ಗೆ, ಮಹಿಳೆಯರಿಗೆ & ಮಕ್ಕಳಿಗೆ ಹಾಗೂ ಗ್ರಾಮಗಳಲ್ಲಿ ಸೂಕ್ತ ತಿಳುವಳಿಕೆಗಳನ್ನು ನೀಡಲಾಗಿರುತ್ತದೆ.
- ಅಪರಾಧ ಚಟುವಟಿಕೆಗಳಲ್ಲಿ ಹಾಗೂ ಮಕ್ಕಳ ಭಿಕ್ಷಾಟನೆಯಲ್ಲಿ ತೊಡಗಿಸಿರುವಂತಹ ಅಪರಿಚಿತ ವ್ಯಕ್ತಿಗಳು ಕಂಡುಬಂದಲ್ಲಿ ಠಾಣೆಗೆ ಮಾಹಿತಿ ನೀಡುವಂತೆ ಸೂಚಿಸಲಾಗಿರುತ್ತದೆ.
- ಮಹಿಳೆ ಮತ್ತು ಮಕ್ಕಳ ಸುರಕ್ಷತೆಗಾಗಿ ವಿವಿಧ ಹೆಸರುಗಳಡಿ ವಿಶೇಷ ಪಡೆಗಳನ್ನು ರಚಿಸಿದ್ದು, ಸದರಿ ಪಡೆಯು ನಗರದ ಮತ್ತು ಜಿಲ್ಲಾ ವ್ಯಾಪ್ತಿಯ ಶಾಲಾ- ಕಾಲೇಜು, ಪಾರ್ಕಗಳು, ಹಾಸ್ಟೆಲ್, ಪಿಜಿ, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ಹೆಚ್ಚಾಗಿ ಮಹಿಳೆಯರು ಮತ್ತು ಮಕ್ಕಳು ಓಡಾಡುವ ಇತರೆ ಸ್ಥಳಗಳಲ್ಲಿ ಪ್ರತಿದಿನ ಗಸ್ತು ಕರ್ತವ್ಯ ನಿರ್ವಹಿಸುತ್ತಾರೆ.
- ಬಸ್ ನಿಲ್ದಾಣ, ರೈಲು ನಿಲ್ದಾಣ, ವಿಮಾನ ನಿಲ್ದಾಣ ಮತ್ತು ಜನನಿಬಿಡ ಪ್ರದೇಶಗಳಂತಹ ಪ್ರಮುಖ ಸ್ಥಳಗಳನ್ನು ಗುರುತಿಸಿ, ಸಿಸಿ ಟಿ.ವಿ ಕ್ಯಾಮರಾಗಳನ್ನು ಅಳವಡಿಸಲಾಗಿದ್ದು, ಅವುಗಳ ಸಹಾಯದಿಂದ ಮಹಿಳೆಯರ ಮತ್ತು ಮಕ್ಕಳ ಸಾಗಾಟ ಮಾಡುವವರ ಮೇಲೆ ನಿಗಾವಹಿಸಲಾಗಿದೆ.
- ಕೃತ್ಯ ನಡೆದ ಸ್ಥಳದಲ್ಲಿ ಹಾಗೂ ಸುತ್ತಾಮುತ್ತ ಲಭ್ಯವಿದ್ದ ಸಿಸಿಟಿವಿ ಕ್ಯಾಮರಾದ ಫೂಟೇಜ್‌ಗಳನ್ನು ಪರಿಶೀಲನೆ ಮಾಡಲಾಗುತ್ತದೆ.
- ಲಭ್ಯವಿರುವ ಮಾಹಿತಿಯೊಂದಿಗೆ (ಚಹರೆ) ಟ್ರಾಕ್ ಚೈಲ್ಡ್ ತಂತ್ರಾಂಶದಲ್ಲಿ ಮಗುವಿನ ದೈಹಿಕ ಚಹರೆಯನ್ನು ಮಿಸ್ಸಿಂಗ್ ಪರ್ಸನ್ ಬ್ಯೂರೋಗೆ ಕಳುಹಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾನವ ಕಳ್ಳಸಾಗಾಣಿಕೆ ಪ್ರಕರಣಗಳನ್ನು ತಡೆಗಟ್ಟಲು ಮಾನವ ಕಳ್ಳಸಾಗಾಣಿಕೆ ನಿಷೇಧ ಘಟಕ ಹಾಗೂ ಸಂಬಂಧಪಟ್ಟ ಎಸ್‌ಸಿಆರ್‌ಬಿ (ರಾಜ್ಯ ಅಪರಾಧ ದಾಖಲಾತಿ ಘಟಕ) ಮತ್ತು ಎನ್‌ಸಿಆರ್‌ಬಿ (ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ) ಪೊಲೀಸ್ ಅಧಿಕಾರಿಗಳನ್ನು ಸಂಪರ್ಕಿಸಿ ಮಾನವ ಕಳ್ಳಸಾಗಾಣಿಕೆ ಅಪರಾಧಗಳ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ.

ಅಪಹರಣಕ್ಕೊಳಗಾದ ಮಗುವಿನ ಭಾವಚಿತ್ರಗಳ ನೋಟೀಸುಗಳನ್ನು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂಟಿಸುವ ಮೂಲಕ, ಸಾಮಾಜಿಕ ಜಾಲತಾಣಗಳಲ್ಲಿ, ಎಲ್ಲಾ ವರ್ಗದ ಜನತೆಯನ್ನೂ ತಲುಪುವಂತೆ ವ್ಯಾಪಕ ಪ್ರಚಾರ ನೀಡಿ ಸಾರ್ವಜನಿಕರ ಸಹಕಾರದಿಂದ ಈ ಪ್ರಕರಣದಲ್ಲಿ ಅಪಹರಣಕ್ಕೊಳಗಾದ ಮಗು ಮತ್ತು ಆರೋಪಿಯನ್ನು ಪತ್ತೆ ಮಾಡಲಾಗುತ್ತದೆ.

- ಶಾಪಿಂಗ್ ಮಾಲ್‌ಗಳು, ಉದ್ಯಾನವನಗಳು, ಮನರಂಜನಾ ಸ್ಥಳಗಳು, ಕ್ರೀಡಾ ಸ್ಥಳಗಳು ಮತ್ತು ಸಾಮಾನ್ಯವಾಗಿ ಅಪಹರಣಕ್ಕೊಳಗಾದ ಮಕ್ಕಳು ಇರಬಹುದಾದ ಸ್ಥಳಗಳಲ್ಲಿ ಶೋಧನೆ ಮಾಡಿ ಅಪಹರಣಕ್ಕೊಳಗಾದ ಮಗುವನ್ನು ಮತ್ತು ಆರೋಪಿಯನ್ನು ಪತ್ತೆ ಮಾಡಲಾಗುವುದು.
- ಸರ್ಕಾರೇತರ ಎನ್.ಜಿ.ಓ ಗಳ ಸಹಕಾರದೊಂದಿಗೆ ಕಾಣೆಯಾದ ಮಕ್ಕಳ ಪತ್ತೆಗಾಗಿ ಶ್ರಮಿಸಲಾಗುತ್ತಿದೆ.
- ನಿರ್ಮಾಣದ ಹಂತದಲ್ಲಿರುವಂತಹ ಕಟ್ಟಡಗಳು, ಬಳಕೆಯಾಗದಂತಹ ಕಟ್ಟಡಗಳು, ಆಸ್ಪತ್ರೆಗಳು ಮತ್ತು ಔಷಧಾಲಯಗಳು, ರೈಲ್ವೆ ಪೊಲೀಸರು ಮತ್ತಿತರ ಸ್ಥಳಗಳಲ್ಲಿ ವಿಚಾರಣೆ ನಡೆಸಿ, ಅವರಿಂದ ಮಾಹಿತಿಯನ್ನು ಸಂಗ್ರಹಿಸಿ ಅಪಹರಣಕ್ಕೊಳಗಾದ ಮಗುವನ್ನು ಮತ್ತು ಆರೋಪಿಯನ್ನು ಪತ್ತೆ ಮಾಡಲಾಗುವುದು.
- ಕಾಣೆಯಾದ ಪ್ರಕರಣಗಳ ಪೈಕಿ 60 ದಿನಗಳೊಳಗಾಗಿ ಪತ್ತೆಯಾಗದ ಪ್ರಕರಣಗಳನ್ನು ಪರಿಣಾಮಕಾರಿ ತನಿಖೆಗಾಗಿ ವಿಶೇಷ ಘಟಕವಾದ ಎಹೆಚ್‌ಟಿಯು (Anti Human Trafficking Unit) ಘಟಕಗಳಿಗೆ ವರ್ಗಾವಣೆ ಮಾಡುವುದು.
- ಅನಾಥಾಶ್ರಮಗಳಲ್ಲಿ, ಆಶ್ರಮಗಳಲ್ಲಿ, ಆಧ್ಯಾತ್ಮಿಕ ಸ್ಥಳಗಳಲ್ಲಿ ಮತ್ತು ಬಾಲಮಂದಿರಗಳಲ್ಲಿ ಹುಡುಕುವುದು.
- ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿನ ಬೀಟ್ ಸಿಬ್ಬಂದಿಗಳ ಮೂಲಕ ಹಾಗೂ ಬೀಟ್ ಗ್ರೂಪ್ ಸದಸ್ಯರ ಮೂಲಕ ಮಾನವ ಕಳ್ಳಸಾಗಾಣಿಕೆ ಬಗ್ಗೆ ಸಂಬಂಧಿಸಿದಂತೆ ಮುಂಚಿತವಾಗಿ ಮಾಹಿತಿ ಸಂಗ್ರಹಿಸಿ ಸೂಕ್ತ ಮುಂಜಾಗ್ರತಾ ಕ್ರಮ ಕೈಕೊಳ್ಳುವ ವ್ಯವಸ್ಥೆ ಮಾಡಲಾಗಿದೆ.

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯ:**

ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳು ಈ ಕೆಳಕಂಡಂತಿವೆ:

1. ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಮಮಇ 48 ಮಮಅ 2018, ದಿನಾಂಕ:06.08.2019 ರನ್ವಯ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಗಳನ್ನು ರಚಿಸಿ ಆದೇಶ ಹೊರಡಿಸಲಾಗಿದೆ.
2. ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆ ಕುರಿತು ಅರಿವು ಮೂಡಿಸಲು, ವಿವಿಧ ಇಲಾಖೆಗಳ ಜವಾಬ್ದಾರಿ ಕುರಿತು ಹಾಗೂ ಪ್ರಕರಣಗಳು ದಾಖಲಾಗಿದ್ದಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ಕ್ರಮ ಬದ್ಧ ಕಾರ್ಯವಿಧಾನದ ಮಾರ್ಗಸೂಚಿಯನ್ನು ಸಿದ್ಧಪಡಿಸಿ ಸಂಬಂಧಪಟ್ಟ ಇಲಾಖೆಗಳಿಗೆ ವಿತರಿಸಲಾಗಿದೆ ಹಾಗೂ ಈ ಬಗ್ಗೆ ಭಾಗೀದಾರ ಇಲಾಖೆಗಳಿಗೆ ತರಬೇತಿ ಹಮ್ಮಿಕೊಳ್ಳಲಾಗಿದೆ.
3. ಪ್ರತಿ ವರ್ಷ ಜುಲೈ 30 ರಂದು "ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ" ಯನ್ನು ಅರ್ಥಪೂರ್ಣವಾಗಿ ಆಚರಿಸಲು ಭಾಗೀದಾರ ಇಲಾಖೆಗಳಿಗೆ ಅಗತ್ಯ ಕ್ರಮ ವಹಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಂದ ಸುತ್ತೋಲೆ ಹೊರಡಿಸಲಾಗಿದೆ ಹಾಗೂ ಈ ದಿನದಂದು ಮಾನವ ಕಳ್ಳ ಸಾಗಾಣಿಕೆ ತಡೆ ಕುರಿತು ರಾಜ್ಯ ಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಕಾರ್ಯಾಗಾರಗಳನ್ನು ಕಾನೂನು ಸೇವಾ ಪ್ರಾಧಿಕಾರಗಳ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗುತ್ತಿದೆ.
4. ಮಹಿಳೆಯರ ಮತ್ತು ಮಕ್ಕಳ ಅಕ್ರಮ ಸಾಗಾಣಿಕೆ ತಡೆಗಟ್ಟಲು ಭಾಗೀದಾರ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗಿದೆ.

| | | |
|---|---|---|
| | | 5. 2023-24ನೇ ಸಾಲಿನಲ್ಲಿ ಆಕಾಶವಾಣಿ ಹಾಗೂ ದೂರದರ್ಶನದಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆ ಕುರಿತು ಅರಿವು ಮೂಡಿಸುವ ಮಾಹಿತಿಯನ್ನು ಪ್ರಸಾರ ಮಾಡಲು ಕ್ರಮವಹಿಸಲಾಗಿದೆ. |
| ಇ. | ಸಾಮಾಜಿಕ ಹಾಗೂ ಕೌಟುಂಬಿಕ ಬೆಂಬಲವಿಲ್ಲದೇ, ಪ್ರತ್ಯೇಕ ಆದಾಯವೂ ಇಲ್ಲದಿರುವ ಮಹಿಳೆಯರಿಗೆ ಸರ್ಕಾರ ಯಾವ ರೀತಿಯ ನೆರವು ಹಾಗೂ ಪುನರ್ವಸತಿ ಕಲ್ಪಿಸುತ್ತಿದೆ; | ಸಾಮಾಜಿಕ ಹಾಗೂ ಕೌಟುಂಬಿಕ ಬೆಂಬಲವಿಲ್ಲದೇ, ಪ್ರತ್ಯೇಕ ಆದಾಯವೂ ಇಲ್ಲದಿರುವ ಮಹಿಳೆಯರಿಗಾಗಿ ಸರ್ಕಾರವು ಮಹಿಳೆಯರಿಗೆ ಮೂಲಭೂತ ಸೌಕರ್ಯಗಳು, ಸಮಾಲೋಚನಾ ಸೇವೆ, ವೈದ್ಯಕೀಯ ನೆರವು, ಕಾನೂನು ನೆರವು, ತಾತ್ಕಾಲಿಕ ಆಶ್ರಯ ಇತ್ಯಾದಿ ಸೌಲಭ್ಯ ಒದಗಿಸುವ ಯೋಜನೆಗಳ ಮಾಹಿತಿಯನ್ನು ಅನುಬಂಧ-2ರಲ್ಲಿ ಒದಗಿಸಲಾಗಿದೆ. |
| ಈ. | ಮಹಿಳೆಯರ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ಸಬಲೀಕರಣಕ್ಕಾಗಿ ಸರ್ಕಾರದ ಯೋಜನೆಗಳು ಯಾವುವು: | **<u>ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯ:</u>**<br><br>ಮಹಿಳೆಯರ ಸಬಲೀಕರಣಕ್ಕಾಗಿ ಇಲಾಖೆ ಮೂಲಕ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ:<br><br>• **ಗೃಹಲಕ್ಷ್ಮಿ ಯೋಜನೆ:** ರಾಜ್ಯದ ಮಹಿಳೆಯರ ಆರ್ಥಿಕ ಸಬಲೀಕರಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ.2,000/- ಗಳನ್ನು ನೀಡಲಾಗುತ್ತಿದೆ.<br><br>• **ಸ್ತ್ರೀಶಕ್ತಿ ಯೋಜನೆ:-** ಸ್ವ-ಸಹಾಯ ಗುಂಪುಗಳ ಮೂಲಕ ಮಹಿಳೆಯರ ಸಬಲೀಕರಣದ ಧ್ಯೇಯದೊಂದಿಗೆ 2000-2001 ನೇ ಸಾಲಿನಲ್ಲಿ ಸ್ತ್ರೀಶಕ್ತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಸ್ತ್ರೀಶಕ್ತಿ ಯೋಜನೆಯನ್ನು ಸಮಾಜದ ಬಡ ಕುಟುಂಬದ, ಸಾಮಾಜಿಕ ಅಥವಾ ಆರ್ಥಿಕವಾಗಿ ಹಿಂದುಳಿದ, ಸಮಾನ ಮನಸ್ಸಿನ ಭೂರಹಿತ ಮಹಿಳಾ ಕೃಷಿ ಕಾರ್ಮಿಕರು, ಪರಿಶಿಷ್ಟ ಜಾತಿ ಅಥವಾ ವರ್ಗಕ್ಕೆ ಸೇರಿದ 15-20 ಮಹಿಳೆಯರನ್ನು ಒಟ್ಟು ಸೇರಿಸಿ 1.65 ಲಕ್ಷ ಗುಂಪುಗಳನ್ನು ರಚಿಸಲಾಗಿದೆ.<br><br>**<u>ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ:</u>**<br><br>ವಿಕಲಚೇತನ ಮಹಿಳೆಯ ಸಾಮಾಜಿಕ ಆರ್ಥಿಕ ಸಬಲೀಕರಣಕ್ಕಾಗಿ ಇಲಾಖೆಯು ಹಮ್ಮಿಕೊಂಡಿರುವ ಯೋಜನೆಗಳ ವಿವರಗಳು ಈ ಕೆಳಕಂಡಂತಿರುತ್ತದೆ.<br><br>1. ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳು.<br>2. ಸರ್ಕಾರದ ವತಿಯಿಂದ ನಡೆಯುತ್ತಿರುವ ಉದ್ಯೋಗಸ್ಥ, ಮಹಿಳೆಯರ ಮತ್ತು ತರಬೇತಿದಾರರ ವಸತಿ ನಿಲಯ.<br>3. ಆಧಾರ ಯೋಜನೆ.<br>4. ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿರುವ ಉದ್ಯೋಗಸ್ಥ, ಮಹಿಳೆಯರ ಮತ್ತು ತರಬೇತಿದಾರರ ವಸತಿ ನಿಲಯ.<br>5. ಶಿಶುಪಾಲನಾ ಭತ್ಯೆ ಯೋಜನೆ.<br>6. ವಿಕಲಚೇತನರಿಗೆ ಮಾಸಿಕ ಪೋಷಣಾ ಭತ್ಯೆ. |

| | | |
|---|---|---|
| ಉ. | ಹಿರಿಯ ನಾಗರೀಕರ ಸಬಲೀಕರಣಕ್ಕೆ ಹಾಗೂ ಅವರ ನೆರವಿಗೆ ಇರುವ ಯೋಜನೆಗಳು ಯಾವುವು? | ಹಿರಿಯ ನಾಗರಿಕರ ಸಬಲೀಕರಣಕ್ಕೆ ಹಾಗೂ ಅವರ ನೆರವಿಗೆ ಇರುವ ಯೋಜನೆಗಳು ಈ ಕೆಳಕಂಡಂತಿರುತ್ತದೆ.<br>1. ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು.<br>2. ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಗಳು.<br>3. ವೃದ್ಧಾಶ್ರಮಗಳು.<br>4. ಹಿರಿಯ ನಾಗರಿಕರ ಮಾಸಿಕ ಪೋಷಣಾ ಭತ್ಯೆ. |

**ಸಂಖ್ಯೆ: ಮಮಇ 38 ಮಮಅ 2024**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.

ಅನುಬಂಧ - 1

## HUMAN TRAFFICKING FOR THE YEAR 2021

| SL NO | District Name | FEMALE | BOY | GIRL |
|---|---|---|---|---|
| 1 | Bagalkot | 1 | 0 | 0 |
| 2 | Ballari | 5 | 0 | 0 |
| 3 | Belagavi Dist | 4 | 1 | 0 |
| 4 | Bengaluru City | 170 | 2 | 8 |
| 5 | Bengaluru Dist | 2 | 0 | 0 |
| 6 | Bidar | 1 | 0 | 0 |
| 7 | Chikkamagaluru | 0 | 0 | 2 |
| 8 | Davanagere | 6 | 1 | 0 |
| 9 | Dharwad | 1 | 0 | 0 |
| 10 | Hubballi Dharwad City | 9 | 1 | 0 |
| 11 | K.G.F | 3 | 1 | 0 |
| 12 | Kalaburagi City | 4 | 0 | 0 |
| 13 | Karnataka Railways | 0 | 8 | 1 |
| 14 | Kodagu | 1 | 0 | 0 |
| 15 | Koppal | 1 | 0 | 0 |
| 16 | Mangaluru City | 1 | 0 | 2 |
| 17 | Mysuru City | 0 | 0 | 0 |
| 18 | Mysuru Dist | 1 | 0 | 0 |
| 19 | Ramanagara | 1 | 6 | 2 |
| 20 | Shivamogga | 0 | 1 | 0 |
| 21 | Tumakuru | 4 | 0 | 1 |
| 22 | Uttara Kannada | 1 | 0 | 1 |
| 23 | Yadgir | 0 | 0 | 0 |
| **Grand Total** | | **216** | **21** | **17** |

| HUMAN TRAFFICKING FOR THE YEAR 2022 | | | | |
|---|---|---|---|---|
| SL NO | District Name | FEMALE | BOY | GIRL |
| 1 | Bagalkot | 5 | 7 | 7 |
| 2 | Ballari | 2 | 2 | 3 |
| 3 | Belagavi Dist | 5 | 0 | 0 |
| 4 | Bengaluru City | 235 | 1 | 5 |
| 5 | Bengaluru Dist | 6 | 0 | 0 |
| 6 | Chamarajanagar | 0 | 1 | 0 |
| 7 | Chickballapura | 2 | 0 | 0 |
| 8 | Chikkamagaluru | 0 | 0 | 1 |
| 9 | Davanagere | 5 | 1 | 1 |
| 10 | Dharwad | 3 | 0 | 0 |
| 11 | Hassan | 9 | 4 | 5 |
| 12 | Hubballi Dharwad City | 7 | 0 | 2 |
| 13 | K.G.F | 3 | 0 | 0 |
| 14 | Kalaburagi City | 1 | 0 | 0 |
| 15 | Karnataka Railways | 0 | 2 | 0 |
| 16 | Kodagu | 1 | 0 | 0 |
| 17 | Koppal | 2 | 0 | 0 |
| 18 | Mandya | 2 | 1 | 0 |
| 19 | Mangaluru City | 5 | 0 | 9 |
| 20 | Mysuru City | 6 | 0 | 1 |
| 21 | Mysuru Dist | 0 | 0 | 1 |
| 22 | Raichur | 4 | 1 | 0 |
| 23 | Ramanagara | 0 | 5 | 1 |
| 24 | Shivamogga | 4 | 6 | 3 |
| 25 | Tumakuru | 2 | 0 | 0 |
| 26 | Udupi | 0 | 0 | 0 |
| 27 | Uttara Kannada | 11 | 0 | 0 |
| 28 | Vijayanagara | 1 | 0 | 0 |
| | **Grand Total** | **321** | **31** | **39** |

| HUMAN TRAFFICKING FOR THE YEAR 2023 | | | | |
|---|---|---|---|---|
| **SL NO** | **District Name** | **FEMALE** | **BOY** | **GIRL** |
| 1 | Ballari | 5 | 0 | 0 |
| 2 | Bengaluru City | 233 | 0 | 16 |
| 3 | Bengaluru Dist | 7 | 0 | 1 |
| 4 | Chickballapura | 3 | 0 | 0 |
| 5 | Chikkamagaluru | 0 | 0 | 4 |
| 6 | Chitradurga | 0 | 0 | 1 |
| 7 | Davanagere | 7 | 0 | 0 |
| 8 | Dharwad | 2 | 0 | 0 |
| 9 | Hassan | 2 | 2 | 0 |
| 10 | Hubballi Dharwad City | 3 | 1 | 0 |
| 11 | K.G.F | 1 | 0 | 0 |
| 12 | Kolar | 8 | 0 | 0 |
| 13 | Mandya | 0 | 0 | 1 |
| 14 | Mangaluru City | 4 | 0 | 0 |
| 15 | Mysuru City | 0 | 0 | 2 |
| 16 | Mysuru Dist | 2 | 0 | 0 |
| 17 | Raichur | 6 | 0 | 1 |
| 18 | Ramanagara | 4 | 0 | 0 |
| 19 | Shivamogga | 4 | 0 | 0 |
| 20 | Tumakuru | 0 | 1 | 1 |
| 21 | Uttara Kannada | 4 | 0 | 0 |
| 22 | Vijayanagara | 4 | 0 | 0 |
| 23 | Vijayapur | 0 | 0 | 0 |
| **Grand Total** | | **299** | **4** | **27** |

| HUMAN TRAFFICKING FOR THE YEAR 2024 | | | | |
|---|---|---|---|---|
| **SL NO** | **District Name** | **FEMALE** | **BOY** | **GIRL** |
| 1 | Ballari | 0 | 0 | 0 |
| 2 | Bengaluru City | 22 | 0 | 3 |
| 3 | Chickballapura | 0 | 0 | 1 |
| 4 | Tumakuru | 1 | 0 | 0 |
| 5 | Udupi | 1 | 0 | 0 |
| 6 | Vijayanagara | 0 | 0 | 0 |
| **Grand Total** | | **24** | **0** | **4** |

## ಅನುಬಂಧ-2

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯ:

## ಮಹಿಳೆಯರ ಸಬಲೀಕರಣಕ್ಕಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ:

### ರಾಜ್ಯ ಸರ್ಕಾರದ ಯೋಜನೆಗಳು:

1) **ಸಾಂತ್ವನ**: ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರ ಹಾಗೂ ಲೈಂಗಿಕ ಕಿರುಕುಳಕ್ಕೊಳಗಾದ ಮಹಿಳೆಯರಿಗೆ ಸಹಾಯ ಒದಗಿಸುವ ಉದ್ದೇಶದಿಂದ ಸಾಂತ್ವನ ಯೋಜನೆಯನ್ನು 2000-01ನೇ ಸಾಲಿನಲ್ಲಿ ಜಾರಿಗೆ ಬಂದಿರುತ್ತದೆ. ಇಂತಹ ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ಆಪ್ತ ಸಮಾಲೋಚನೆ, ಕಾನೂನು ಮತ್ತು ಪೊಲೀಸ್ ನೆರವು, ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ ಒಟ್ಟು 180 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ.
2) **ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006 :** ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ನಡೆದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸಲು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ಹಾಗೂ ನಿಯಮ 2006 ನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- ಜಿಲ್ಲಾ ಮಟ್ಟದಲ್ಲಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ **47** ಪ್ರತ್ಯೇಕ ಸಂರಕ್ಷಣಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರನ್ನು ದೌರ್ಜನ್ಯಕ್ಕೊಳಗಾದ ಮಹಿಳೆಯರನ್ನು ರಕ್ಷಿಸಲು ಸಂರಕ್ಷಣಾಧಿಕಾರಿಗಳೆಂದು ನೇಮಿಸಲಾಗಿದೆ.
- **116** ಸ್ವಯಂಸೇವಾ ಸಂಸ್ಥೆಗಳನ್ನು ನೊಂದ ಮಹಿಳೆಯರಿಗೆ ಕಾನೂನು, ವೈದ್ಯಕೀಯ ಹಾಗೂ ಇತರೆ ನೆರವು ನೀಡಲು ಸೇವಾಧಾತ ಸಂಸ್ಥೆಗಳು (Service Providers) ಎಂದು ಅಧಿಸೂಚನೆ ಹೊರಡಿಸಲಾಗಿದೆ.'
- ರಾಜ್ಯದ ಎಲ್ಲಾ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ ಉಚಿತ ಕಾನೂನು ಸಲಹಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಆ ಕೇಂದ್ರಗಳಲ್ಲಿ ನುರಿತ ನ್ಯಾಯವಾದಿಗಳು ಪ್ರತಿ ಬುಧವಾರ ಮತ್ತು ಶನಿವಾರ ಉಚಿತ ಕಾನೂನು ಸಲಹೆ ನೀಡುತ್ತಿದ್ದಾರೆ.

### ಕೇಂದ್ರ ಸರ್ಕಾರದ ಯೋಜನೆಗಳು:

**3) ಶಕ್ತಿಸದನ (ಸ್ವಾಧಾರ ಗೃಹ/ಉಜ್ವಲ ಕೇಂದ್ರಗಳು)** :

(ಎ) ಸಾಧಾರ ಗೃಹ: ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ತಾತ್ಕಾಲಿಕ ಆಶ್ರಯ, ಆಹಾರ, ಬಟ್ಟೆ, ವೈದ್ಯಕೀಯ ಸೇವೆ, ಸಮಾಲೋಚನೆ, ಕಾನೂನು ನೆರವು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯಾದ್ಯಂತ **51** ಸ್ವಾಧಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

(ಬಿ) ಉಜ್ವಲ: ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯವು ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು, ಸಾಗಾಣಿಕೆಗೆ ಹಾಗೂ ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟವರನ್ನು ರಕ್ಷಿಸಲು, ಇವರಿಗೆ ಪುನರ್‌ವಸತಿ ಕಲ್ಪಿಸಲು ಮತ್ತು ಕುಟುಂಬದವರೊಂದಿಗೆ ಪುನರ್ ವಿಲೀನಗೊಳಿಸುವುದು. ಪ್ರಸ್ತುತ ರಾಜ್ಯದಲ್ಲಿ **13** ಉಜ್ವಲ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ.

**4) ಒನ್ ಸ್ಟಾಪ್ ಸೆಂಟರ್ (ಸಖಿ)** :
ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒದಗಿಸುವ ಉದ್ದೇಶದಿಂದ ಒನ್ ಸ್ಟಾಪ್ ಸೆಂಟರ್ ಕೇಂದ್ರ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಪ್ರಸ್ತುತ 31 ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.

**5) ಮಹಿಳಾ ಸಹಾಯವಾಣಿ-181 :**
ಮಹಿಳೆಯರಿಗೆ ಮಾಹಿತಿಯನ್ನು ನೀಡಲು ಹಾಗೂ ದೌರ್ಜನ್ಯ/ಸಂಕಷ್ಟದಲ್ಲಿರುವ ಮಹಿಳೆಯರಿಗೆ ನೆರವನ್ನು ಒದಗಿಸುವ ನಿಟ್ಟಿನಲ್ಲಿ ಮಹಿಳಾ ಸಹಾಯವಾಣಿ -181 ಎಂಬ ಉಚಿತ ದೂರವಾಣಿ ಸೇವೆಯನ್ನು 24x7 ಗಂಟೆಗಳು ಒದಗಿಸಲಾಗುವುದು. 2023-24ನೇ ಸಾಲಿನಲ್ಲಿ WCD Control room ನ್ನು C-DAC ಸಂಸ್ಥೆಯ ಸಹಯೋಗದೊಂದಿಗೆ ಸ್ಥಾಪಿಸಲಾಗಿದೆ.

**ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಮಹಿಳೆಯರ ಸಾಮಾಜಿಕ ಮತ್ತು ಆರ್ಥಿಕ ಸಬಲೀಕರಣಕ್ಕಾಗಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ವಿವರ.**

1. **ಉದ್ಯೋಗಿನಿ ಯೋಜನೆ:-**
   ಮಹಿಳೆಯರು ಆದಾಯ ಉತ್ಪನ್ನಕರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಸ್ವಯಂ ಉದ್ಯೋಗಿಗಳಾಗಲು ಬ್ಯಾಂಕ್ ಮೂಲಕ ಸಾಲ ಮತ್ತು ನಿಗಮದ ಮೂಲಕ ಸಹಾಯಧನವನ್ನು ನೀಡಲಾಗುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಸಾಲದ ಘಟಕ ವೆಚ್ಚ ಕನಿಷ್ಟ ರೂ.1.00 ಲಕ್ಷದಿಂದ ಗರಿಷ್ಟ ರೂ.3.00 ಲಕ್ಷಗಳು, ಸಹಾಯಧನದ ಮೊತ್ತ ಶೇಕಡ 50 ರಷ್ಟು, ಗರಿಷ್ಟ ರೂ.1,50,000/-ಗಳನ್ನು ನೀಡಲಾಗುತ್ತದೆ. ಕುಟುಂಬದ ವಾರ್ಷಿಕ ಆದಾಯದ ಗರಿಷ್ಟ ಮಿತಿ ರೂ.2.00 ಲಕ್ಷಗಳಿಗೆ ಮಿತಿಗೊಳಿಸಿದೆ.
   ಸಾಮಾನ್ಯ ವರ್ಗ ಮತ್ತು ವಿಶೇಷ ವರ್ಗದ ಮಹಿಳೆಯರಿಗೆ ಯೋಜನಾ ವೆಚ್ಚ ರೂ.1.00 ಲಕ್ಷದಿಂದ ರೂ.3.00 ಲಕ್ಷಗಳವರೆಗೆ, ಶೇ.30ರಷ್ಟು ಅಥವಾ ಗರಿಷ್ಠ ರೂ.90,000/-ಗಳ ಸಹಾಯಧನ ನೀಡಲಾಗುವುದು. ಸಾಮಾನ್ಯ ವರ್ಗದವರ ಕುಟುಂಬದ ವಾರ್ಷಿಕ ಆದಾಯವನ್ನು ಗರಿಷ್ಠ ರೂ.1.50 ಲಕ್ಷಗಳಿಗೆ ಮಿತಿಗೊಳಿಸಿದೆ.ಎಲ್ಲಾ ವರ್ಗದ ಮಹಿಳೆಯರಿಗೆ ವಯೋಮಿತಿ 18 ವರ್ಷ ಮೇಲ್ಪಟ್ಟು ಗರಿಷ್ಠ 55 ವರ್ಷದೊಳಗಿರಬೇಕು.
   ಫಲಾನುಭವಿಗಳನ್ನು ಆಯಾ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯ ಆಯ್ಕೆ ಸಮಿತಿಯಿಂದ ಆಯ್ಕೆ ಮಾಡಲಾಗುತ್ತದೆ.
2. **ಕಿರುಸಾಲ ಯೋಜನೆ:-**
   ಈ ಯೋಜನೆಯಡಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸ್ತ್ರೀಶಕ್ತಿ ಯೋಜನೆಯಡಿ ರಚನೆಗೊಂಡ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳು ಆರ್ಥಿಕವಾಗಿ ಸಬಲರಾಗಲು ಪ್ರತಿ ಸ್ತ್ರೀಶಕ್ತಿ ಸ್ವ-ಸಹಾಯ ಸಂಘಕ್ಕೆ ನಿಗಮದ ವತಿಯಿಂದ ರೂ.1.00 ಲಕ್ಷದಿಂದ ರೂ.2.00 ಗಳ ಬಡ್ಡಿರಹಿತ ಸಾಲ ಒದಗಿಸುವುದು. 2023-24ನೇ ಸಾಲಿಗೆ ಈ ಯೋಜನೆಯಡಿ ಅನುದಾನ ಒದಗಿಸಿರುವುದಿಲ್ಲ.
3. **ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ:-**
   ಲಿಂಗತ್ವ ಅಲ್ಪಸಂಖ್ಯಾತರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸಲು ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ ನೇರವಾಗಿ ರೂ.30,000/-ಗಳ ಪ್ರೋತ್ಸಾಹಧನವನ್ನು ನೀಡಲಾಗುವುದು.
   ಫಲಾನುಭವಿಗಳನ್ನು ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯಿಂದ ಆಯ್ಕೆ ಮಾಡಲಾಗುತ್ತದೆ.
4. **ಚೇತನ ಯೋಜನೆ:-**
   ದಮನಿತ ಮಹಿಳೆಯರು (ಮಹಿಳಾ ಲೈಂಗಿಕ ಕಾರ್ಯಕರ್ತೆಯರು) ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ಅನುವಾಗುವಂತೆ ನಿಗಮದಿಂದ ನೇರವಾಗಿ ರೂ.30,000/-ಗಳ ಪ್ರೋತ್ಸಾಹಧನವನ್ನು ನೀಡಲಾಗುವುದು.
   ಫಲಾನುಭವಿಗಳನ್ನು ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯಿಂದ ಆಯ್ಕೆ ಮಾಡಲಾಗುತ್ತದೆ.
5. **ಧನಶ್ರೀ :-**
   18 ರಿಂದ 60 ವಯೋಮಾನದ ಹೆಚ್.ಐ.ವಿ ಸೋಂಕಿತ ಹಾಗೂ ಬಾಧಿತ ಮಹಿಳೆಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ನಿಗಮದಿಂದ ನೇರವಾಗಿ ರೂ.30,000/-ಗಳ ಪ್ರೋತ್ಸಾಹಧನವನ್ನು ಒದಗಿಸಲಾಗುವುದು.
   ಫಲಾನುಭವಿಗಳನ್ನು ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯಿಂದ ಆಯ್ಕೆ ಮಾಡಲಾಗುತ್ತದೆ.

**6. ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ:-**

ಆರ್ಥಿಕವಾಗಿ ಮಾಜಿ ದೇವದಾಸಿಯರನ್ನು ಸಬಲೀಕರಣಗೊಳಿಸಲು ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ 45 ವರ್ಷ ಮೇಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರಿಗೆ ನೇರವಾಗಿ ಪ್ರೋತ್ಸಾಹಧನ ಮೊತ್ತ ರೂ.30,000/-ಗಳ ಆರ್ಥಿಕ ಸೌಲಭ್ಯವನ್ನು ನೀಡಲಾಗುತ್ತಿದೆ. ಫಲಾನುಭವಿಗಳನ್ನು ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯಿಂದ ಆಯ್ಕೆ ಮಾಡಲಾಗುತ್ತದೆ. ದೇವದಾಸಿ ಪದ್ಧತಿಯ ನಿರ್ಮೂಲನೆಗಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳು, ಕಾನೂನು ಶಿಬಿರ ಹಾಗೂ ಮಾಜಿ ದೇವದಾಸಿ ಮಹಿಳೆಯರಿಗಾಗಿ ಆರೋಗ್ಯ ಶಿಬಿರಗಳನ್ನು ಕೈಗೊಳ್ಳಲಾಗುತ್ತಿದೆ.

**7. ಮಾಜಿ ದೇವದಾಸಿಯರಿಗೆ ವಸತಿ ನಿರ್ಮಾಣ ಯೋಜನೆ:-**

ಕರ್ನಾಟಕ ರಾಜ್ಯದ 14 ಜಿಲ್ಲೆಗಳಲ್ಲಿ ನಿವೇಶನ ಹೊಂದಿರುವ ವಸತಿ ರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ವಸತಿ ಯೋಜನೆಯನ್ನು ರಾಜೀವ್ ಗಾಂಧಿ ಗ್ರಾಮೀಣಾಭಿವೃದ್ಧಿ ವಸತಿ ನಿಗಮದ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ. 2018-19ನೇ ಸಾಲಿನಿಂದ ಗ್ರಾಮೀಣ ಪ್ರದೇಶದಲ್ಲಿ ರೂ.1.75 ಲಕ್ಷ ಹಾಗೂ ನಗರ ಪ್ರದೇಶದಲ್ಲಿ ರೂ.2.00 ಲಕ್ಷ ಘಟಕ ವೆಚ್ಚದಲ್ಲಿ ವಸತಿ ಸೌಲಭ್ಯ ಕಲ್ಪಿಸಲಾಗುತ್ತಿದೆ. 2023-24ನೇ ಸಾಲಿಗೆ ಈ ಯೋಜನೆಯಡಿ ಅನುದಾನ ಒದಗಿಸಿರುವುದಿಲ್ಲ.

**8. ಬಡ್ಡಿ ಸಹಾಯಧನ ಯೋಜನೆ (ಕರ್ನಾಟಕ ರಾಜ್ಯ ಆರ್ಥಿಕ ಹಣಕಾಸು ನಿಗಮ ಮೂಲಕ)**

2023-24ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ 132 ರಲ್ಲಿ ಮಹಿಳಾ ಉದ್ಯಮಿಗಳು ಆತಿಥ್ಯ ಆರೈಕೆ ಮತ್ತು ಪ್ರವಾಸೋದ್ಯಮದಂತಹ ಸೇವಾ ವಲಯದಲ್ಲಿ ಹೆಚ್ಚಿನ ಅವಕಾಶ ಪಡೆಯುತ್ತಿದ್ದಾರೆ. ಆದ್ದರಿಂದ, ಸೇವಾ ವಲಯದಲ್ಲಿ ಮಹಿಳಾ ಉದ್ಯಮಿಗಳನ್ನು ಉತ್ತೇಜಿಸಲು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಶೇ.4ರ ಬಡ್ಡಿದರದಲ್ಲಿ ರೂ.5.00 ಲಕ್ಷಗಳಿಂದ ರೂ.5.00 ಕೋಟಿಗಳ ವರೆಗೆ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ.

**9. ಮಹಿಳೆಯರಿಗೆ ಬಡ್ಡಿ ಸಹಾಯಧನ (ಇಂದಿರಾ ಯೋಜನೆ) ಯೋಜನೆ:-**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಯ ದಕ್ಷತೆಯನ್ನು ಹೆಚ್ಚಿಸಲು ಮೇಲ್ವಿಚಾರಕರಿಗೆ ದ್ವಿ-ಚಕ್ರ ವಾಹನ ಖರೀದಿಗಾಗಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ರೂ.50,000/-ಗಳ ಬಡ್ಡಿರಹಿತ ಸಾಲವನ್ನು ನೀಡಲಾಗುವುದು.

**10. ಮಹಿಳಾ ತರಬೇತಿ ಯೋಜನೆ:-**

ಆರ್ಥಿಕವಾಗಿ ಹಿಂದುಳಿದ ಮಹಿಳೆಯರಿಗೆ ಕೌಶಲ್ಯ ತರಬೇತಿ ನೀಡಿ, ಅವರಲ್ಲಿ ಉದ್ಯಮಶೀಲತೆಯನ್ನು ಬೆಳೆಸುವ ಗುರಿಯನ್ನು ಹೊಂದಲಾಗಿದೆ. ತರಬೇತಿಯನ್ನು ಕರ್ನಾಟಕ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಮಾರ್ಗಸೂಚಿಗಳಂತೆ ನಡೆಸಲಾಗುವುದು.

**11. ವೃದ್ಧಿ ಯೋಜನೆ:-**

2022-23ನೇ ಸಾಲಿನ ಆಯವ್ಯಯ ಬಾಷಣ ಕಂಡಿಕೆ:142 ರಲ್ಲಿ ಘೋಷಿಸಿರುವಂತೆ "ವ್ಯಾಪಾರ/ಉದ್ಯಮಗಳಲ್ಲಿ ಮಹಿಳೆಯರ ಉಪಸ್ಥಿತಿಯನ್ನು ಹೆಚ್ಚಸಲು KITS (ಕರ್ನಾಟಕ ನಾವೀನ್ಯತೆ ಮತ್ತು ತಂತ್ರಜ್ಞಾನ ಸೊಸೈಟಿ) ರವರು "ಎಲಿವೇಟ್" ಯೋಜನೆಯಡಿ ಗುರುತಿಸಲ್ಪಟ್ಟ ಮಹಿಳಾ ಉದ್ದಿಮೆದಾರರಿಗೆ/ಮಹಿಳಾ ನೇತೃತ್ವದ ಸ್ಟಾರ್ಟ್‌ಅಫ್ ಗಳಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ರೂ.5.00 ರಿಂದ 10.00 ಲಕ್ಷಗಳ ತನಕ ನೇರ ಸಾಲವನ್ನು ಒದಗಿಸಿ "ವೃದ್ಧಿ" ಹೆಸರಿನಡಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. 2023-24ನೇ ಸಾಲಿಗೆ ಅನುದಾನ ನಿಗದಿಯಾಗಿರುವುದಿಲ್ಲ.

**12. ಆಸಿಡ್‌ದಾಳಿ ಸಂತ್ರಸ್ತ ಮಹಿಳೆಯರಿಗೆ ಸಾಲ ಸೌಲಭ್ಯ (ಗೆಳತಿ) ಯೋಜನೆ :-**

ರಾಜ್ಯದಲ್ಲಿ ಆಸಿಡ್ ದಾಳಿಗೆ ಒಳಗಾದ ಮಹಿಳೆಯರನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ಉದ್ದೇಶದಿಂದ 2023-24ನೇ ಸಾಲಿನ ಆಯವ್ಯಯ ಘೋಷಣೆಯಂತೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಆಸಿಡ್ ದಾಳಿಗೆ ಒಳಗಾದ ಸಂತ್ರಸ್ತೆಯರು ಸ್ವ-ಉದ್ಯೋಗ ಕೈಗೊಳ್ಳಲು ಅವರ ಅವಶ್ಯಕತೆಗನುಸಾರವಾಗಿ ಗರಿಷ್ಠ ರೂ.5.00 ಲಕ್ಷಗಳ ವರೆಗೆ (ಶೇ.50 ರಷ್ಟು ಸಾಲ ಮತ್ತು ಶೇ.50 ರಷ್ಟು ಸಹಾಯಧನ) ಬಡ್ಡಿರಹಿತ ಆರ್ಥಿಕ ಸೌಲಭ್ಯವನ್ನು ನಿಗಮದಿಂದ ನೀಡಲಾಗುವುದು. ರಾಜೀವ್‌ಗಾಂಧಿ ವಸತಿ ನಿಗಮದ ಮೂಲಕ ರೂ.5.00 ಲಕ್ಷಗಳ ವೆಚ್ಚದಲ್ಲಿ ಆಸಿಡ್ ದಾಳಿಗೆ ಒಳಗಾದ ಮಹಿಳೆಯರಿಗೆ ವಸತಿ ನಿರ್ಮಾಣ ಸೌಲಭ್ಯ ಒದಗಿಸಲಾಗುವುದು.